ವಿಷಯ : ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನದಲ್ಲಿ ವಿಕಲಚೇತನರಿಗೆ ಅನುದಾನ ಮೀಸಲಿಡುವ ಬಗ್ಗೆ.

ಓದಲಾಗಿದೆ :

1) ಸರ್ಕಾರದ ಆದೇಶ ಸಂಖ್ಯೆ: ಯೋಇ 79 ಯೋಪವಿ 2011, ದಿನಾಂಕ:08.09.2011.
2) ಸರ್ಕಾರದ ಆದೇಶ ಸಂಖ್ಯೆ: ಯೋಇ 39 ಯೋಪವಿ 2012(ಭಾಗ), ದಿನಾಂಕ:10.07.2012.
3) ಶ್ರೀ ಕಳಕಪ್ಪ ಜಿ.ಬಂಡಿ, ಮಾಜಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು.

ಪ್ರಸ್ತಾವನೆ:

ಮೇಲೆ ಓದಲಾದ ಸರ್ಕಾರಿ ಆದೇಶಗಳಲ್ಲಿ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಅಂಗವಿಕಲರಿಗೆ ಪ್ರತಿ ವರ್ಷ ಗರಿಷ್ಠ ಶೇಕಡ 10ರಷ್ಟು ಅನುದಾನವನ್ನು ಒದಗಿಸಲು ಸರ್ಕಾರವು ಸೂಕ್ತ ಆದೇಶವನ್ನು ಹೊರಡಿಸಿದ್ದು, ಸದರಿ ಅನುದಾನದಲ್ಲಿ ಅಂಗವಿಕಲರಿಗೆ ತ್ರಿಚಕ್ರ ವಾಹನ ಕೃತಕ ಅಂಗಗಳನ್ನು ಒದಗಿಸಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಓದಲಾದ (3)ರ ಮಾನ್ಯ ಮಾಜಿ ಸಚಿವರ ಪತ್ರದಲ್ಲಿ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನದಲ್ಲಿ ವಿಕಲಚೇತನರಿಗೆ ಸಂಬಂಧಪಟ್ಟ ಸಲಕರಣೆಗಳನ್ನು ಒದಗಿಸಲು ಅನುಮತಿ ನೀಡುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ : ಯೋಇ 21 ಯೋಪವಿ 2013**

**ಬೆಂಗಳೂರು ದಿನಾಂಕ : 22.06.2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಸರ್ಕಾರವು ಕರ್ನಾಟಕ ಶಾಸಕರ ಪ್ರದೇಶಾಭಿವೃದ್ಧಿ ಅನುದಾನದಲ್ಲಿ ಅಂಗವಿಕಲರಿಗೆ ತ್ರಿಚಕ್ರ ವಾಹನ ಮತ್ತು ಕೃತಕ ಅಂಗ ಜೋಡಣೆಗಳನ್ನು ಒದಗಿಸಲು ಮೀಸಲಿಟ್ಟಿರುವ ಶೇಕಡ 10ರಷ್ಟು ಅನುದಾನದಲ್ಲೇ ಸಂಪೂರ್ಣ ಶ್ರವಣ ದೋಷವುಳ್ಳವರು, ಸಂಪೂರ್ಣ ಅಂಧರು ಹಾಗೂ ಮೂಕ ವಿಕಲಚೇತನರಿಗೆ ಬೇಕಾದ ಸಲಕರಣೆಗಳನ್ನು ಒದಗಿಸಲು ಅವಕಾಶ ಕಲ್ಪಿಸಿ ಆದೇಶಿಸಿದೆ.

ಉಳಿದಂತೆ ಮೇಲೆ ಓದಲಾದ (1) ಹಾಗೂ (2)ರ ಆದೇಶದಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.

654 / 6-1-14

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

S. Umavathi

(ಎಸ್. ಉಮಾವತಿ)
ಸರ್ಕಾರದ ಅಧೀನ ಕಾರ್ಯದರ್ಶಿ-1&2,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ

ಇವರಿಗೆ :

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಲು

----2